# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಜಂಟಿ ನಿರ್ದೇಶಕರು (ನಗರ ಯೋಜನೆ – ಉತ್ತರ) ರವರ ಕಛೇರಿ, ಎನ್.ಆರ್.ಚೌಕ, ಬೆಂಗಳೂರು – 560 002.

ಸಂಖ್ಯೆ: BBMP/Addl.Dir/ JDNORTH/LP/0645/2013-14 ದಿನಾಂಕ: 02-07-2016

## ಪ್ರಾರಂಭಿಕ ಪ್ರಮಾಣಪತ್ರ

ವಿಷಯ: ಆಸ್ತಿ ಸಂಖ್ಯೆ. 10, (ಹಳೇ ಸರ್ವೆ ನಂ. 97/2, 98/1, 98/2, 99/1, 99/2 & 100/1, 100/2 ಮತ್ತು 107/2), ಕೆ.ಚನ್ನಸಂದ್ರ ಗ್ರಾಮ, ಕೆ.ಆರ್.ಪುರಂ ಹೋಬಳಿ, ವಾರ್ಡ್ ನಂ. 26, ಬೆಂಗಳೂರು, ಇಲ್ಲಿರುವ ಸ್ವತ್ತಿನಲ್ಲಿ ನಿರ್ಮಿಸುತ್ತಿರುವ ಬಿಲ್ಡಿಂಗ್ – 1 ವಸತಿ ಸಮುಚ್ಚಯ ಕಟ್ಟಡ ಹಾಗೂ ಬಿಲ್ಡಿಂಗ್ – 2 ಕ್ಲಬ್‌ಹೌಸ್ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡುವ ಬಗ್ಗೆ.

**ಉಲ್ಲೇಖ:** 1) ನಕ್ಷೆ ಮಂಜೂರಾತಿ ಸಂಖ್ಯೆ: BBMP/Addl.Dir/JDNORTH/0645/2013-14 ದಿನಾಂಕ: 09-03-2015
2) ತಮ್ಮ ಮನವಿ ಪತ್ರ ದಿನಾಂಕ: 23-03-2006

* * * * * * *

ಆಸ್ತಿ ಸಂಖ್ಯೆ. 10, (ಹಳೇ ಸರ್ವೆ ನಂ. 97/2, 98/1, 98/2, 99/1, 99/2 & 100/1, 100/2 ಮತ್ತು 107/2), ಕೆ.ಚನ್ನಸಂದ್ರ ಗ್ರಾಮ, ಕೆ.ಆರ್.ಪುರಂ ಹೋಬಳಿ, ವಾರ್ಡ್ ನಂ. 26, ಬೆಂಗಳೂರು, ಇಲ್ಲಿ ಬಿಲ್ಡಿಂಗ್ – 1, ತಳ + ನೆಲ + ಮೇಲಿನ 13 ಅಂತಸ್ತುಗಳ 334 ಘಟಕಗಳುಳ್ಳ ವಸತಿ ಸಮುಚ್ಚಯ ಕಟ್ಟಡ ಮತ್ತು ಬಿಲ್ಡಿಂಗ್ – 2 ರಲ್ಲಿ ನೆಲ + ಮೇಲಿನ 1 ನೇ ಅಂತಸ್ತು ಮತ್ತು ಭಾಗಶಃ 2ನೇ ಅಂತಸ್ತಿನ ಕ್ಲಬ್‌ಹೌಸ್ ಕಟ್ಟಡ ನಿರ್ಮಿಸಲು ಉಲ್ಲೇಖ (1) ರಂತೆ ಈ ಕಛೇರಿಯಿಂದ ದಿನಾಂಕ: 09-03-2015 ರಂದು ನಕ್ಷೆ ಮಂಜೂರಾತಿಯನ್ನು ನೀಡಲಾಗಿರುತ್ತದೆ ಸದರಿ ಬಿಲ್ಡಿಂಗ್ – 1 ಮತ್ತು 2 ರ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡಲು ಉಲ್ಲೇಖ (2) ರಲ್ಲಿ ಕೋರಿರುವುದಕ್ಕೆ ಸಂಬಂಧಿಸಿದಂತೆ ಕಟ್ಟಡ ನಿರ್ಮಾಣದ ಸ್ಥಳವನ್ನು ಪರಿಶೀಲಿಸಲಾಗಿ, ಮಂಜೂರಾತಿ ನಕ್ಷೆಯನ್ವಯ ಕಟ್ಟಡ ನಿರ್ಮಾಣ ಪ್ರಾರಂಭಿಸಿದ್ದು, ಆರ್.ಸಿ.ಸಿ. ಸ್ಥಂಭಗಳನ್ನು ನಿರ್ಮಿಸಲಾಗಿರುತ್ತದೆ.

ಅಪರ ನಿರ್ದೇಶಕರು (ನಗರ ಯೋಜನೆ) ರವರು ಪ್ರಾರಂಭಿಕ ಪ್ರಮಾಣಪತ್ರ ನೀಡುವ ಪ್ರಸ್ತಾವನೆಗೆ ದಿನಾಂಕ: 04-05-2016 ರಂದು ಅನುಮೋದನೆ ನೀಡಿರುತ್ತಾರೆ. ಸದರಿ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರದ ಬಾಬ್ತು ಶುಲ್ಕ ರೂ. 3,06,000/- ಗಳಿಗೆ ಡಿ.ಡಿಯನ್ನು ಸಲ್ಲಿಸಿ ಈ ಕಛೇರಿಯ ರಶೀದಿ ಸಂಖ್ಯೆ: RE-ifms331-TP/000088 ದಿನಾಂಕ: 30-05-2016 ರಂದು ಸಂದಾಯ ಮಾಡಿರುವುದರಿಂದ, ಸದರಿ ಬಿಲ್ಡಿಂಗ್ – 1 ಮತ್ತು 2 ರ ಕಟ್ಟಡಕ್ಕೆ ಈ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ಪ್ರಾರಂಭಿಕ ಪ್ರಮಾಣಪತ್ರವನ್ನು ನೀಡಲಾಗಿದೆ.

1. ಕಟ್ಟಡದ ಕಾಮಗಾರಿಯನ್ನು ಮಂಜೂರಾತಿ ನಕ್ಷೆಯಂತೆ ನಿಯಮಾನುಸಾರ ನಿರ್ಮಿಸತಕ್ಕದ್ದು.
2. ಕಟ್ಟಡ ನಿರ್ಮಾಣದ ಸ್ಥಳದಲ್ಲಿ ಅಕ್ಕ-ಪಕ್ಕದವರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ, ವಾಹನ ಸಂಚಾರಕ್ಕೆ ಅಡಚಣೆಯಾಗದಂತೆ, ಅಪಘಾತ ಆಗದಂತೆ ಕಟ್ಟಡ ನಿರ್ಮಾಣ ಕೈಗೊಳ್ಳುವುದು ಹಾಗೂ ಕೆಲಸಗಾರರಿಗಾಗಿ ಶೆಡ್ ಮತ್ತು ತಾತ್ಕಾಲಿಕ ಶೌಚಾಲಯಗಳನ್ನು ನಿರ್ಮಿಸತಕ್ಕದ್ದು.
3. ನಕ್ಷೆ ಮಂಜೂರಾತಿಯ ಸಿಂಧುತ್ವವು ಉಲ್ಲೇಖ (1) ರಂತೆ ಅನುಮೋದನೆ ನೀಡಿದ ದಿನಾಂಕದಿಂದ 5 ವರ್ಷಗಳ ಅವಧಿಗೆ ಮಾನ್ಯತೆ ಹೊಂದಿದ್ದು, ಈ ಅವಧಿಯೊಳಗೆ ನಿರ್ಮಾಣ ಕಾರ್ಯವನ್ನು ಪೂರ್ಣಗೊಳಿಸಿ ಸ್ವಾಧೀನಾನುಭವ ಪ್ರಮಾಣಪತ್ರವನ್ನು ಪಡೆಯತಕ್ಕದ್ದು.

4. ವಿವಿಧ ಇಲಾಖೆಗಳಿಂದ ನೀಡಲಾಗಿರುವ ನಿರಾಕ್ಷೇಪಣಾ ಪತ್ರದಲ್ಲಿ ವಿಧಿಸಲಾಗಿರುವ ಷರತ್ತಿಗೆ ಬದ್ಧರಾಗಿರತಕ್ಕದ್ದು.
5. ಕಟ್ಟಡದ 5ನೇ ಅಂತಸ್ತಿನಿಂದ ಕಟ್ಟಡ ನಿರ್ಮಾಣ ಮಾಡುವ ಮೊದಲು ಹೆಚ್.ಎ.ಎಲ್. ಇಲಾಖೆಯಿಂದ ಪಡೆದಿರುವ ನಿರಾಕ್ಷೇಪಣಾ ಪತ್ರವನ್ನು ಸಲ್ಲಿಸುವುದು
6. ಕಟ್ಟಡ ನಿರ್ಮಾಣದ ಪ್ರಗತಿಯನ್ನು ಕಾಲಾನುಸಾರ ಸಂಬಂಧಪಟ್ಟ ಇಂಜಿನಿಯರಿಂಗ್ ಉಪ-ವಿಭಾಗಕ್ಕೆ ಮಾಹಿತಿಯನ್ನು ನೀಡಿ ಮಂಜೂರಾತಿ ನಕ್ಷೆಯಂತೆ ನಿರ್ಮಿಸುತ್ತಿರುವ ಬಗ್ಗೆ ಪರಿವೀಕ್ಷಣೆಗೆ ಒಳಪಡಿಸತಕ್ಕದ್ದು.

02/07/16

ಜಂಟಿ ನಿರ್ದೇಶಕರು (ನಗರ ಯೋಜನೆ –ಉತ್ತರ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

02/7/16 02/07/16 02/07/16

ಗೆ,

ಮೆ: ಡಿ.ಎಸ್.ಆರ್. ಇನ್‌ಫ್ರಾಸ್ಟ್ರಕ್ಚರ್ ಪ್ರೈ ಲಿ.,
ಡಿ.ಎಸ್.ಆರ್. ದಿಯಾ ಆರ್ಕೇಡ್,
# 220, ಮೊದಲನೇ ಮಹಡಿ, 9ನೇ ಮುಖ್ಯರಸ್ತೆ,
ಹೆಚ್.ಆರ್.ಬಿ.ಆರ್. ಲೇಔಟ್, 1ನೇ ಬ್ಲಾಕ್ ಎಕ್ಸ್‌ಟೆನ್‌ಷನ್,
ಬೆಂಗಳೂರು – 560 043.